ಕೋಲಾರ್ ಡಿಸ್ಟ್ರಿಕ್ಟ್.

ತಾರೀಖು 8ನೇ ಆಗಸ್ಟ್ 1896.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

1. ಜೋಡಿ ಬಾಕಿದಾರರಾದ ಹನುಮಂತಾಚಾರ್ರು ವಗೈರೆರಿಂದ ಬರಬೇಕಾದ ನೀರಸರದಿ ಬಾಕಿಗಾಗಿ ಎರಡಿ ನಮೂದಾಗುವ ಫೊರ್‌ಫಿಟ್ಟಾದ ಸ್ಥಿರಸ್ವತ್ತು ಕೋಲಾರ ಡಿಸ್ಟ್ರಿಕ್ಟ್ ಚಿಕ್ಕಬಳ್ಳಾಪುರ ತಾಲ್ಲೂಕು ಅಮಲ್ದಾರ್ರ ಕಚೇರೀಲಿ 1896ನೇ ಸೆಪ್ಟೆಂಬರ್ 26ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟಿ ಇದೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕಮಂ ಜಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1895–96ನೇ ಸಾಲಿಗೆ ಪೂರ್ತಿಯಾಗಿ* ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಶೀಲ್ ವೇರೀಗೆ 96–12–5 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜ್ ಬಾಬತ್ತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯ್ತು ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನು ಹಾಜರ್ಮಾಡಿದವನು ಕಳೆದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತ್ತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟ್ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತನ್ನ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನು ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮ್ಮಿಷನರವರಿಂದ ಮುಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮ್ಮಿಷನರವರಿಂದ ಹರಾಜು ಮುಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಒಂದು ಹರಾಜು ಸರಟಿಫಿಕೇಟು ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯ್ತು 30 ದಿವಸಗಳಲ್ಲಿ ಡೆಪ್ಯೂಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈನಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕಿದಾರನ ಹೆಸರು.	ಸ್ವತ್ತಿನ ತಪ್ಶೀಲ್. ಕಟ್ಟಡಗಳು. ಕಟ್ಟಡದ ಹೆಸರು.	ಅಂದಾಜಾ ಕಿಮ್ಮತ್ತು.	ಜಮೀನು. ನಂಬರ್ ಅಥವಾ ಜಮೀನಿನ ಹೆಸರು.	ಖುಷ್ಕೀ ತರೀ ಅ ಇ ಬಾ ಬಾಗಾಯತು.	ಸ್ಥಿತಿ.	ಆಕಾರ.	ಸರ್ಕಾರಕ್ಕೆ ಬರಬೇಕಾದ ನೋಟಿನ ಫೀ ಗೈರೆ ಸುಂಕವಾದ ಬಾಕಿ ಮೊಬಲಗು.
1	2	3	4	5	6	7	8	9	10	11
					ರೂ. ಆ. ಪೈ.			ಎಕರೆ. ಗುಂಟೆ.	ರೂ. ಆ. ಪೈ.	ರೂ. ಆ. ಪೈ.
ಚಿಕ್ಕಬಳ್ಳಾಪುರ.	ಚಿಕ್ಕಬಳ್ಳಾಪುರ.	ಜೋಡಿ ಹೊನ್ನೇನಹಳ್ಳಿ ಗ್ರಾಮ.	ಹನುಮಂತಾಚಾರ್ರು ವಗೈರೆರು	..	.. .. ..	ಗ್ರಾಮದಲ್ಲಿ ಬಾಕಿದಾರಿಗೆ ಅರುಣ ಜಿಲ್ಲೆಗಳು.	ಖುಷ್ಕೀ ತರೀ ಬಾಗಾಯತು ಪರಂಪೋಕು	299 11 20 13 38 26 78 20	596 4 0	96 0 5
							ಟೋಟಲ್	436 30		ನೋಟಿನ ಫೀ ವಗೈರೆ 0–12–0
							ಸಾಲಿನಾ ಸರ್ಕಾರಕ್ಕೆ ಕೊಡತಕ್ಕ ಜೋಡಿ	.. ..	ನೀರ್ ಸರಿ ..	96–12–5 ಹರಾಜ್ ತಾರೀಕು ವರಿಗೆ ಬಡ್ಡಿ ಕೊಡಬೇಕು.

ಸಿ. ಮಾದಯ್ಯ,
ಡೆಪ್ಯೂಟಿ ಕಮ್ಮಿಷನರ್.

ತುಮಕೂರ್ ಡಿಸ್ಟ್ರಿಕ್ಟ್.

ಇಸ್ತಿಹಾರ್ ನಾಮೆ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಸ್ಯ 1896—97ನೇ ಸಾಲಿಗೆ ಅಂದರೆ, 1896ನೇ ಜುಲೈ 1ನೇ ತಾರೀಖು ಲಾಗಾಯತು 1897ನೇ ಜೂನ್ 30ನೇ ತಾರೀಖಿನ ವರಿಗೆ ಈ ಕೆಳಗೆ ಕಂಡ ತಾಲ್ಲೂಕುಗಳಲ್ಲಿರುವ ಕುರಂಗದ ಕಲ್ಲು ಜಮಾಯಿಸತಕ್ಕ ಹಕ್ಕನ್ನ ಆಯಾ ತಾಲ್ಲೂಕು ಕಛೇರಿಯಲ್ಲಿ ಈ ಕೆಳಗೆ ನಮೂದು ಮಾಡಲ್ಪಟ್ಟಿರುವ ತಾರೀಖುಗಳಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆ. ಹರಾಜ್ ಬೆಳಿಗ್ಗೆ 11 ಘಂಟೆಗೆ ಸುರೂ ಆಗುತ್ತೆ.

ತಾಲ್ಲೂಕು.	ತಾರೀಖು.	ಸ್ಥಳ.
ತಿಪ್ಪೂರ್	1896ನೇ ಆಗಸ್ಟ್ 22	ತಿಪ್ಪೂರ್
ಪಾವಗಡ	ಡಿಟೋ	ಪಾವಗಡ

2. ಅಮಲ್ದಾರ್ರು ಅಥವಾ ಶಿರಸ್ತೇದಾರ್ರು ಹರಾಜು ಮಾಡಿಸುತ್ತಾರೆ.

3. ಚಡಸವಾಲ್ ಅಂಗೀಕರಿಸತಕ್ಕದ್ದು ತುಮಕೂರ್ ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರ್ ಸಾಹೆಬರವರ ಮಂಜೂರಾತಿಗೆ ಬಳಪಟ್ಟಿರುತ್ತೆ.

4. ಹರಾಜು [illegible]ವಾಲ್ ಮಾಡತಕ್ಕವರು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೋ ಅಥವಾ ಪಿಜಂಟರಾಗಿ ಸವಾಲ್ ಮಾಡುತ್ತಾರೆ [illegible]ಗತಿಯನ್ನ ತಿಳಿಸಬೇಕು. ಪಿಜಂಟರಾಗಿ ಸವಾಲ್ ಮಾಡುವದಾದರೆ ತಾವು ಯಾರಿಗೋಸ್ಕರ ಸವಾಲ್ ಮಾಡುತ್ತಾರೋ ಅವರಿಂದ ಪಡದಿರುವ ಆಧಿಕಾರ ಪತ್ರಿಕೆಯನ್ನ ಹಾಜರ್ ಮಾಡಬೇಕು. ಇಲ್ಲವಾದರೆ ಅವರ ಸವಾಲ್ ತಿರಸ್ಕರಿಸಲ್ಪಡುತ್ತೆ.

5. ಚಡಸವಾಲ್ದಾರ್ರು ಹರಾಜು ಕಾಲದಲ್ಲಿ ತಮ್ಮ ಸವಾಲ್ ಮೊಬಲಗ್ ಪೈಕೀ ಕೀಕಡಾ 25 ರೂಪಾಯಿ ಮೇರಿಗೆ ಡಿಪಾಜಿಟ್ ಮೊಬಲಗು ಹಾಜರ್ಮಾಡಬೇಕಲ್ಲದೆ ಹರಾಜು ಮುಂಜೂರ್ಮಾಡಲ್ಪಟ್ಟ ಸಂಗತಿ ಆಯಾ ತಾಲ್ಲೂಕು ಅಮಲ್ದಾರ್ರಿಂದ ಚಡಸವಾಲ್ದಾರ್ರಿಗೆ ತಿಳಿಸಲ್ಪಟ್ಟ ತಾರೀಖು ಲಾಗಾಯತು 7 ದಿವಸಗಳೊಳಗಾಗಿ ಚಡಸವಾಲ್ ಮೊಬಲಗಿನ ಮೇಲೆ ರೂಪಾಯಿ ವಂದಕ್ಕೆ ವಂದು ಆಣೆಯುಂತೆ ಆಗುವ ಲೋಕಲ್ ಸೆಸ್ಸ್ ದೀಖಲ್ ಚಡಸವಾಲ್ ಮೊಬಲಗನ್ನ ಸಾವತಿ ಮಾಡಿಎದ್ದರೆ ಹಾಗೆ ಇಟ್ಟ ಡಿಪಾಜಿಟ್ ಮೊಬಲಗು ಸರಕಾರಕ್ಕೆ ಪೂರ್ತಿನಾಗಿ ಜಪ್ತಗಿ ತೆಗೆದುಕೊಳ್ಳಲ್ಪಡುತ್ತೆ.